ವಿಜಯ ಕರ್ನಾಟಕ 21/2/14

### ವಿಧಾನಪರಿಷತ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

# ಬೇಸಿಗೆಯಲ್ಲಿ ನಗರದಲ್ಲಿ ನೀರಿನ ಸಮಸ್ಯೆ ಉಂಟಾಗದು

**■ ವಿಕ ಸುದ್ದಿಲೋಕ** ಬೆಂಗಳೂರು

ಬೇಸಿಗೆಯಲ್ಲಿ ಬೆಂಗಳೂರು ಮಹಾನಗರದಲ್ಲಿ ಕುಡಿಯುವ ನೀರು ಸಮಸ್ಯೆ ಎದುರಾಗದಂತೆ ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗುವುದು. ಅದಕ್ಕಾಗಿ ಬಿಬಿಎಂಪಿ ಹಾಗೂ ಜಲಮಂಡಳಿಯನ್ನು ಸಜ್ಜುಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನ ಪರಿಷತ್‌ನಲ್ಲಿ ಭರವಸೆ ನೀಡಿದರು.

ಸದಸ್ಯ ಡಿ.ಎಸ್.ವೀರಯ್ಯ ಅವರು ಪ್ರಶ್ನೋತ್ತರ ವೇಳೆಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ ಮುಖ್ಯಮಂತ್ರಿ "ಅಂತರ್ಜಲ ಕುಸಿಯುತ್ತಿರುವುದು ನಿಜಕ್ಕೂ ಆತಂಕಕಾರಿ ಸಂಗತಿ. ಈಗಾಗಲೇ ಬೆಂಗಳೂರು ಮಹಾನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಎಲ್ಲ ಕ್ರಮ ಕೈಗೊಳ್ಳಲಾಗಿದೆ. ಅಗತ್ಯವಿರುವ ಕಡೆ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ," ಎಂದರು.

"ಪಾಲಿಕೆ ಹಾಗೂ ಜಲಮಂಡಳಿಗೆ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಎಲ್ಲ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ತಾಕೀತು ಮಾಡಲಾಗಿದೆ. ಜನರಿಗೆ ಕುಡಿಯುವ ನೀರು ನೀಡುವುದು ಸರಕಾರದ ಜವಾಬ್ದಾರಿ. ಅದಕ್ಕಾಗಿ ಕುಡಿಯುವ ನೀರಿಗಾಗಿಯೇ 66ಕೋಟಿ ರೂ. ಮೀಸಲಿಡಲಾಗಿದೆ. ಅಗತ್ಯವಿರುವ ಕಡೆ ಹೊಸದಾಗಿ ಕೊಳವೆ ಬಾವಿಗಳನ್ನು ತೆರೆಯಲಾಗುವುದು ಹಾಗೂ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಲಾಗುವುದು. ಒಟ್ಟಾರೆ ನೀರಿನ ಕೊರತೆ ಉಂಟಾಗದಂತೆ ಎಲ್ಲ ರೀತಿಯ ತುರ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ," ಎಂದು ಹೇಳಿದರು.

"ಕಾವೇರಿ ಮೂಲದಿಂದ ಪಂಪ್ ಮಾಡುವ ಮುಖ್ಯ ಸ್ಥಾವರಗಳಿಗೆ ಮತ್ತು ನಗರದ ಪಂಪಿಂಗ್ ಸ್ಥಾವರಗಳಿಗೆ ವಿದ್ಯುತ್ ವ್ಯತ್ಯಯ ಆಗದಂತೆ ಬೆಸ್ಕಾಂ ಹಾಗೂ ವಿದ್ಯುತ್ ಪ್ರಸರಣ ನಿಗಮದ ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಲಾಗಿದೆ. ನಗರದ ಸಿಜೆಎಫ್, ಮಲ್ಲೇಶ್ವರಂ, ಎಲ್‌ಎಲ್‌ಆರ್ ರೇಸ್ ಕೋರ್ಸ್ ರಸ್ತೆ, ಹೆಗ್ಗನಹಳ್ಳಿ, ಹೊಸಹಳ್ಳಿ ಮತು ಎಚ್.ಜಿ.ಆರ್ ಹೈಗ್ರೌಂಡ್ ಜಲ ಸಂಗ್ರಹಾಗಾರಗಳಲಿ ನೀರು ಸರಬರಾಜಿಗೆ ಅಡಚಣೆ ಆಗದಂತೆ ವಿದ್ಯುತ್ ಜನರೇಟರ್‌ಗಳನು ಅಳವಡಿಸಲಾಗಿದೆ. ತುರ್ತು ನೀರಿನ ಸಮಸ್ಯೆ ನೀಗಿಸಲು ಟ್ಯಾಂಕರ್ ಮೂಲಕ ಶುಲ್ಕ ರಹಿತವಾಗಿ ನೀರು ಪೂರೈಕೆ ಮಾಡಲಾಗುತ್ತಿದೆ," ಎಂದು ತಿಳಿಸಿದರು.

"ಪಾಲಿಕೆ ವ್ಯಾಪ್ತಿಯ ನಾಲ್ಕು ವಲಯಗಳಲ್ಲಿ ಹೊಸದಾಗಿ ಕೊಳವೆ ಬಾವಿಗಳನ್ನು ತೆರೆಯಲು 3300.00ಲಕ್ಷ ಹಣ ನಿಗದಿ ಮಾಡಲಾಗಿದೆ," ಎಂದು ಅವರು ಹೇಳಿದರು.

## ತ್ಯಾಜ್ಯ ನೀರು ಶುದ್ಧೀಕರಣಕ್ಕೆ ಘಟಕ

**ಬೆಂಗಳೂರು ಮಹಾನಗರದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯ ನೀರನ್ನು ಶುದ್ಧೀಕರಣಗೊಳಿಸಲು 10 ಹೊಸ ಘಟಕಗಳನ್ನು ತೆರೆಯಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.**

**ವಿಧಾನಪರಿಷತ್‌ನಲ್ಲಿ ಸದಸ್ಯ ಬಿ.ಜೆ.ಪುಟ್ಟಸ್ವಾಮಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು "ಬೆಂಗಳೂರು ನಗರದಲ್ಲಿ ಸದ್ಯ ದಿನಂಪ್ರತಿ 1000 ದಶಲಕ್ಷ ಲೀಟರ್ ತ್ಯಾಜ್ಯ ನೀರು ಉತ್ಪಾದನೆಯಾಗುತ್ತಿದ್ದು, ಅದರಲ್ಲಿ 525ದಶಲಕ್ಷ ಲೀಟರ್ ತ್ಯಾಜ್ಯ ನೀರನ್ನು ಸಂಸ್ಕರಿಸಲಾಗುತ್ತಿದೆ. ಉಳಿದ ತ್ಯಾಜ್ಯ ನೀರನ್ನು ನದಿಗೆ ಬಿಡಲಾಗುತ್ತಿದೆ. ಇದರಿಂದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ ಎಂಬ ಬಗ್ಗೆ ಸರಕಾರಕ್ಕೂ ಕಾಳಜಿ ಇದೆ. ಹಾಗಾಗಿ 2016ರೊಳಗೆ ನಗರದಲ್ಲಿ ಉತ್ಪತ್ತಿಯಾಗುವ ನೂರಕ್ಕೆ ನೂರಷ್ಟು ತ್ಯಾಜ್ಯ ನೀರನ್ನು ಶುದ್ಧೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು," ಎಂದರು.**

---

ವಿಜಯ ಕರ್ನಾಟಕ 21/2/14

## ಹತ್ತಿ ಕಾರ್ಖಾನೆಗೆ ಬೆಂಕಿ

**ಯಾದಗಿರಿ:** ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಮೀಪದ ಹತ್ತಿ ಕಾರ್ಖಾನೆಯಲ್ಲಿ ಶಾರ್ಟ್ ಸರ್ಕಿಟ್‌ನಿಂದ ಗುರುವಾರ ಬೆಂಕಿ ತಗುಲಿ ಕೋಟ್ಯಂತರ ರೂ. ಹಾನಿ ಸಂಭವಿಸಿದೆ. ಎಪಿಎಂಸಿ ಬಳಿಯ ರಾಜೇಂದ್ರ ಆಗ್ರೋ ಇಂಡಸ್ಟ್ರಿಜ್ ಹತ್ತಿ ಜನ್ನಿಂಗ್ ಮತ್ತು ಪ್ರೆಸಿಂಗ್ ಫ್ಯಾಕ್ಟರಿಗೆ ಆಕಸ್ಮಿಕ ಬೆಂಕಿ ತಗುಲಿದೆ. ಇದು ಸುನಿರಿಮಲ್ ಜೈನ್ ಎಂಬುವರಿಗೆ ಸೇರಿದ್ದು.

---

ಕರ್ನಾಟಕ page - 2

## ಬೆಂಕಿ ಆಕಸ್ಮಿಕ ಲಕ್ಷಾಂತರ ರೂ ನಷ್ಟ

ಬೆಂಗಳೂರು, ಫೆ 20; ಜ್ಞಾನಭಾರತಿಯ ಮಾಳಗಾಳ ಮುಖ್ಯರಸ್ತೆಯಲ್ಲಿನ ಮೊಬೈಲ್ ಅಂಗಡಿಯೊಂದಕ್ಕೆ ಆಕಸ್ಮಿಕ ಬೆಂಕಿ ತಗುಲಿ ಲಕ್ಷಾಂತರ ರೂ ಮೌಲ್ಯದ ಮೊಬೈಲ್, ಕಂಪ್ಯೂಟರ್‌ಗಳು ಭಸ್ಮವಾಗಿವೆ. ರಾತ್ರಿ 11 ರ ಸುಮಾರಿಗೆ ಮೊಬೈಲ್ ಅಂಗಡಿಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಈ ಅವಘಡ ಸಂಭವಿಸಿದೆ. ಸುದ್ದಿ ತಿಳಿದ ಕೂಡಲೇ ಅಗ್ನಿಶಾಮಕದಳದ ಸಿಬ್ಬಂದಿಗಳು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಜ್ಞಾನಭಾರತಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಸರ ದರೋಡೆ**